ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ

"ವಿ ಟಿ ಯು ಅಧಿನಿಯಮ ೧೯೯೪" ರ ಅಡಿಯಲ್ಲಿ ಕರ್ನಾಟಕ ಸರ್ಕಾರದಿಂದ ಸ್ಥಾಪಿತವಾದ ರಾಜ್ಯ ವಿಶ್ವವಿದ್ಯಾಲಯ

**Visvesvaraya Technological University**

(State University of Government of Karnataka Established as per the VTU Act, 1994)

"Jnana Sangama" Belagavi-590018, Karnataka, India

Dr. B.E. Rangswamy Ph.D.
Registrar

Phone: (0831) 2498100
Fax :(0831) 2405467


**Ref: VTU/BGM/Aca-Affln 24-25/2023-24/5154** **Date : 28 DEC 2023**

**CIRCULAR**

**Sub: Obtaining NOC from State Govt. / VTU for application to AICTE – reg..**

Ref: State Govt. Circular ED 432 TEC 2023 dt: 14-12-2023

With reference to the above subject, please find enclosed herewith a copy of State Govt. Circular ED 432 TEC 2023 dt: 14-12-2023 for information and necessary compliance.

**BY ORDER,**

28/12/23

**REGISTRAR**

**To,**

The Principals of All Engineering Colleges (Constituent, Affiliated, Affiliated-Autonomous,) under VTU, Belagavi

**Copy to:**

1. The Additional Chief Secretary, Dept. of Higher Education, 2nd Gate, 6th Floor, M S Building, Bengaluru – 560 001
2. The Deputy Secretary, Dept. of Higher Education, 2nd Gate, 6th Floor, M S Building, Bengaluru – 560 001
3. Hon'ble Vice-Chancellor through the Secretary to VC, VTU, Belagavi
4. The Regional Directors (I/C) of all the Regional Offices of VTU
5. The Special Officers of Academic Section, VTU, Belagavi
6. The Concerned Case-workers of Academic Section, VTU, Belagavi
7. The Director (I/C),ITISMU, VTU, Belagavi

OFFICE OF THE REGISTRAR
27 DEC 2023

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 432 ಟಿಇಸಿ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ಸುವರ್ಣ ವಿಧಾನ ಸೌಧ,
ಬೆಳಗಾವಿ, ದಿನಾಂಕ:14.12.2023.

**ಸುತ್ತೋಲೆ**

**ವಿಷಯ:** ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳು/ವಿಶ್ವವಿದ್ಯಾಲಯಗಳು ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಹಾಗೂ ವಿದ್ಯಾರ್ಥಿಗಳ ಪ್ರವೇಶಾತಿ ಮಿತಿ ಹೆಚ್ಚಳ/ ಕಡಿತಗೊಳಿಸುವ/ ಮುಚ್ಚಲು/ ವಿಲೀನಗೊಳಿಸುವ ಸಂದರ್ಭದಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು.

*****

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ರಾಜ್ಯದ ಎಲ್ಲಾ ಖಾಸಗಿ ಅನುದಾನಿತ/ಅನುದಾನರಹಿತ ಶಿಕ್ಷಣ ಸಂಸ್ಥೆಗಳು/ಆಡಳಿತ ಮಂಡಳಿಗಳು ತಮ್ಮ ವ್ಯಾಪ್ತಿಯ ಇಂಜಿನಿಯರಿಂಗ್ ಕಾಲೇಜು & ಸ್ವಾಯತ್ತ ಇಂಜಿನಿಯರಿಂಗ್ ಸಂಸ್ಥೆಗಳಲ್ಲಿನ ತಾಂತ್ರಿಕ ಕೋರ್ಸ್‌ಗಳ ಪ್ರವೇಶಾತಿಗೆ ಸಂಬಂಧಪಟ್ಟಂತೆ, ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರ (No Objection Certificate) ಪಡೆಯದೇ ನೇರವಾಗಿ All India Council for Technical Education(AICTE), ನವದೆಹಲಿ ಇವರಿಗೆ ಅರ್ಜಿ ಸಲ್ಲಿಸಿ, ಹೊಸ ಕೋರ್ಸ್‌ಗಳ ಪ್ರಾರಂಭ/ಚಾಲ್ತಿಯಲ್ಲಿರುವ ಕೋರ್ಸ್‌ಗಳ ಪ್ರವೇಶಾತಿ ಹೆಚ್ಚಳ ಮಾಡುತ್ತಿರುವುದನ್ನು ಸರ್ಕಾರವು ಗಮನಿಸಿರುತ್ತದೆ. ತದನಂತರದಲ್ಲಿ ಪ್ರವೇಶದ ಎಲ್ಲಾ ಪ್ರಕ್ರಿಯೆಗಳು ಮುಗಿದ ನಂತರ ಸರ್ಕಾರಕ್ಕೆ ನಿರಾಕ್ಷೇಪಣಾ ಪ್ರಮಾಣ ಪತ್ರ (No Objection Certificate) ವನ್ನು ನೀಡುವಂತೆ ಕೋರಿ ಪ್ರಸ್ತಾವನೆ ಸಲ್ಲಿಸುತ್ತಿರುವ ಕ್ರಮವು ನಿಯಮ ಬಾಹಿರವಾದ ಕಾರ್ಯವಿಧಾನವಾಗಿದ್ದು, ಇದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿರುತ್ತದೆ.

ಆದ್ದರಿಂದ, 2024-25ನೇ ಶೈಕ್ಷಣಿಕ ಸಾಲಿನಿಂದ ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳು ಹಾಗೂ ಆಡಳಿತ ಮಂಡಳಿಗಳು ಹಾಗೂ ವಿಶ್ವವಿದ್ಯಾಲಯಗಳು ಅನುಸರಿಸಬೇಕಾದ ಕ್ರಮಗಳು ಹಾಗೂ ತಪ್ಪಿದಲ್ಲಿ ಸರ್ಕಾರವು ಕೈಗೊಳ್ಳುವ ಕ್ರಮದ ಬಗ್ಗೆ, ಈ ಕೆಳಕಂಡ ಮಾಹಿತಿಯನ್ನು ತಿಳಿಯಪಡಿಸಲಾಗಿದೆ.

1. ಎಲ್ಲಾ ಖಾಸಗಿ ಅನುದಾನಿತ/ಅನುದಾನರಹಿತ ಶಿಕ್ಷಣ ಸಂಸ್ಥೆಗಳು ಹೊಸದಾಗಿ ಸ್ನಾತಕ/ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲು ಹಾಗೂ ವಿದ್ಯಾರ್ಥಿಗಳ ಪ್ರವೇಶಾತಿ ಮಿತಿಯನ್ನು ಹೆಚ್ಚಳ/ಕಡಿತಗೊಳಿಸಲು ಹಾಗೂ ಕೋರ್ಸ್‌ನ್ನು ಮುಚ್ಚಲು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ(VTU)ದ Local Inquiry Committeeಯು ಸ್ಥಳ ಪರಿಶೀಲನಾ ವರದಿಯನ್ನು ಸಲ್ಲಿಸಿದ ನಂತರವೇ ರಾಜ್ಯ ಸರ್ಕಾರದ ನಿರಾಕ್ಷೇಪಣಾ ಪ್ರಮಾಣ ಪತ್ರ/ ಅನುಮೋದನೆ ಪಡೆಯುವುದು.

505/05
27/12/23

....2

2. ತದನಂತರವಷ್ಟೇ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಸಂಬಂಧಪಟ್ಟ ಶಿಕ್ಷಣ ಸಂಸ್ಥೆಗಳಿಗೆ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಹಾಗೂ ವಿದ್ಯಾರ್ಥಿಗಳ ಪ್ರವೇಶಾತಿ ಮಿತಿ ಹೆಚ್ಚಳ/ಕಡಿತಗೊಳಿಸಲು ಹಾಗೂ ಕೋರ್ಸನ್ನು ಮುಚ್ಚಲು ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡುವುದು.

3. ರಾಜ್ಯದ ಎಲ್ಲಾ ಶಿಕ್ಷಣ ಸಂಸ್ಥೆಗಳು/ಆಡಳಿತ ಮಂಡಳಿಗಳು ರಾಜ್ಯ ಸರ್ಕಾರದಿಂದ ಹಾಗೂ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರಗಳನ್ನು ಕಡ್ಡಾಯವಾಗಿ ಪಡೆದ ನಂತರವೇ All India Council for Technical Education (AICTE)ನ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸುವುದು.

4. ರಾಜ್ಯ ಸರ್ಕಾರದ ಪೂರ್ವಾನುಮತಿ ಇಲ್ಲದೆ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಯಾವುದೇ ಶಿಕ್ಷಣ ಸಂಸ್ಥೆಗಳು/ಆಡಳಿತ ಮಂಡಳಿಗಳಿಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ನೀಡುವಂತಿಲ್ಲ ಹಾಗೂ ಶೈಕ್ಷಣಿಕ ಸಂಸ್ಥೆಗಳು/ಆಡಳಿತ ಮಂಡಳಿಗಳು All India Council for Technical Education (AICTE)ಯ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸುವಂತಿಲ್ಲ.

5. ರಾಜ್ಯದ ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು/ಖಾಸಗಿ ವಿಶ್ವವಿದ್ಯಾಲಯಗಳು/ ಡೀಮ್ಡ್ ವಿಶ್ವವಿದ್ಯಾಲಯಗಳು ತಾಂತ್ರಿಕ ಕೋರ್ಸ್ ಗಳಿಗೆ ಸಂಬಂಧಿಸಿದಂತೆ, ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಹಾಗೂ ವಿದ್ಯಾರ್ಥಿಗಳ ಪ್ರವೇಶಾತಿ ಮಿತಿಯನ್ನು ಹೆಚ್ಚಳ/ಕಡಿತಗೊಳಿಸಲು ನಿಯಮಾನುಸಾರ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಡ್ಡಾಯವಾಗಿ ಅನುಮತಿ ಪಡೆಯುವುದು.

6. ನಿಗದಿತ ಅವಧಿಯೊಳಗೆ ಈ ಎಲ್ಲಾ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದ ಶೈಕ್ಷಣಿಕ ಸಂಸ್ಥೆಗಳ ಕೋರ್ಸ್‌ಗಳನ್ನು ಮಾತ್ರ ಸೀಟ್ ಮ್ಯಾಟ್ರಿಕ್ಸ್‌ನಲ್ಲಿ (Seat Matrix) ಅಳವಡಿಸಲು ಕ್ರಮವಹಿಸಲಾಗುವುದು.

7. ಒಂದು ವೇಳೆ ಶಿಕ್ಷಣ ಸಂಸ್ಥೆಗಳು ಸರ್ಕಾರದಿಂದ/ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರ (NOC) /ಆದೇಶವನ್ನು ಪಡೆಯದೇ ಇದ್ದಲ್ಲಿ ಅಂತಹ ಸಂಸ್ಥೆಗಳ ಕೋರ್ಸ್‌ಗಳನ್ನು ಸೀಟ್ ಮ್ಯಾಟ್ರಿಕ್ಸ್‌ನಲ್ಲಿ ಸೇರ್ಪಡೆಗೊಳಿಸಲು ಪರಿಗಣಿಸುವುದಿಲ್ಲ.

...3

8. ರಾಜ್ಯದ ಶಿಕ್ಷಣ ಸಂಸ್ಥೆಗಳು / ಆಡಳಿತ ಮಂಡಳಿಗಳು ಹೊಸ ಕೋರ್ಸುಗಳನ್ನು ಪ್ರಾರಂಭಿಸಲು ಹಾಗೂ ಪ್ರವೇಶಾತಿ ಮಿತಿ ಹೆಚ್ಚಳ ಮಾಡುವ ಸಲುವಾಗಿ ಅರ್ಜಿ ಸಲ್ಲಿಸಲು ಹಾಗೂ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯವು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಈ ಕೆಳಕಂಡ ಕ್ಯಾಲೆಂಡರ್ ನಂತೆ ಕ್ರಮವಹಿಸುವುದು.

| | | |
|---|---|---|
| 1. | ರಾಜ್ಯದ ಖಾಸಗಿ ಅನುದಾನಿತ/ಅನುದಾನರಹಿತ ಶಿಕ್ಷಣ ಸಂಸ್ಥೆಗಳು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯಕ್ಕೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕ | ಪ್ರತಿ ಕ್ಯಾಲೆಂಡರ್ ವರ್ಷದ ಜನವರಿ-31 |
| 2. | ಅರ್ಜಿಗಳನ್ನು ಪರಿಶೀಲಿಸಿ ಎಲ್ಐಸಿ ವರದಿ ಹಾಗೂ ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಂಸ್ಥೆವಾರು ಪ್ರತ್ಯೇಕ ಪ್ರಸ್ತಾವನೆ ಸಲ್ಲಿಸಲು ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರಿಗೆ ನಿಗದಿಪಡಿಸಿರುವ ದಿನಾಂಕ | ಪ್ರತಿ ಕ್ಯಾಲೆಂಡರ್ ವರ್ಷದ ಮಾರ್ಚ್-31 |

9. ರಾಜ್ಯದ ಎಲ್ಲಾ ಶೈಕ್ಷಣಿಕ ಸಂಸ್ಥೆಗಳು/ಸಂಬಂಧಪಟ್ಟ ಪ್ರಾಧಿಕಾರಗಳು ಮೇಲಿನ ಎಲ್ಲಾ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.

11/12/2023

(ಮಹಾಂತೇಶಪ್ಪ ಎಸ್.ತುರಕನೂರ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ(ತಾಂತ್ರಿಕ ಶಿಕ್ಷಣ)

**ಇವರಿಗೆ:**

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
3. ಎಲ್ಲಾ ಖಾಸಗಿ ಅನುದಾನಿತ/ಅನುದಾನರಹಿತ ಶಿಕ್ಷಣ ಸಂಸ್ಥೆಗಳು(ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ ಇವರ ಮುಖಾಂತರ).
4. ಎಲ್ಲಾ ಸಾರ್ವಜನಿಕ ವಿಶ್ವವಿದ್ಯಾಲಯಗಳು /ಖಾಸಗಿ ವಿಶ್ವವಿದ್ಯಾಲಯಗಳು/ಡೀಮ್ಡ್ ವಿಶ್ವವಿದ್ಯಾಲಯಗಳು.

....4

**ಪ್ರತಿ ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿಗಳು (ತಾಂತ್ರಿಕ & ಯೋಜನೆ/ ವಿಶ್ವವಿದ್ಯಾಲಯ/ಕಾಲೇಜು ಶಿಕ್ಷಣ), ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಸರ್ಕಾರದ ಅಧೀನ ಕಾರ್ಯದರ್ಶಿಗಳು,(ತಾಂತ್ರಿಕ / ಯೋಜನೆ/ ವಿಶ್ವವಿದ್ಯಾಲಯ-1 &2/ಕಾಲೇಜು ಶಿಕ್ಷಣ) ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಶಾಖಾಧಿಕಾರಿಗಳು(ತಾಂತ್ರಿಕ / ಯೋಜನೆ/ ವಿಶ್ವವಿದ್ಯಾಲಯ-1 & 2/ಕಾಲೇಜು ಶಿಕ್ಷಣ) ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.